ವಿಭಾಗ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ

ದಿನಾಂಕ : DATE : 31/3/2021

# ಮೇಲ್ಮನೆಗೆ ಲಾಬಿಗಾರರು ಬರ್ತಿದ್ದಾರೆ: ಹೊರಟ್ಟಿ

## ಹಿಂದೆಲ್ಲ ಸಾಹಿತಿಗಳು, ಕಲಾವಿದರು ಆಯ್ಕೆಯಾಗುತ್ತಿದ್ದರು | ಈಗ ಸೋತವರು, ಪ್ರಭಾವಿಗಳ ಬೆಂಬಲಿಗರಿಂದ ಮೇಲ್ಮನೆ ಪ್ರವೇಶ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 31/3/21

ಸಮಾಜದ ವಿವಿಧ ಕ್ಷೇತ್ರಗಳಲ್ಲಿ ವಿಶೇಷ ಸಾಧನೆ ಮಾಡಿರುವವರಿಗಾಗಿ ಮೀಸಲಿರುವ ವಿಧಾನ ಪರಿಷತ್‌ನ ಸ್ಥಾನಗಳಿಗೆ ರಾಜಕೀಯ ಲಾಬಿ ನಡೆಸುವವರು ಬಂದು ಕೂರುತ್ತಿದ್ದಾರೆ ಎಂದು ಸಭಾಪತಿ ಬಸವರಾಜ ಹೊರಟ್ಟಿ ಬೇಸರ ವ್ಯಕ್ತಪಡಿಸಿದರು.

ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಸಹಯೋಗದಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರಕನ್ನಡಕಾಯಕವರ್ಷಾಚರಣೆಅಂಗವಾಗಿ ಮಂಗಳವಾರ ಹಮ್ಮಿಕೊಂಡಿದ್ದ ಮಾಧ್ಯಮಗಳಲ್ಲಿ ಸರಿಗನ್ನಡ ಬಳಕೆ ಕುರಿತ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು.

1980ರಲ್ಲಿ ಮೊದಲ ಬಾರಿಗೆ ವಿಧಾನ ಪರಿಷತ್‌ಗೆ ಆಯ್ಕೆಯಾಗಿದ್ದು, ಪ್ರಾರಂಭದಲ್ಲಿ ಸಾಹಿತಿಗಳು, ಕಲಾವಿದರು ಮತ್ತು ಬುದ್ಧಿಜೀವಿಗಳು ವಿಧಾನ ಪರಿಷತ್‌ಗೆ ಆಯ್ಕೆಯಾಗುತ್ತಿದ್ದರು. ಆದರೆ, ಪ್ರಸ್ತುತ ಚುನಾವಣೆಗಳಲ್ಲಿ ಪರಾಭವಗೊಂಡವರು, ಪ್ರಭಾವಿ ರಾಜಕಾರಣಿಗಳ ಬೆಂಬಲಿಗರು ಆಯ್ಕೆಯಾಗುತ್ತಿದ್ದಾರೆ ಎಂದರು. ಮಾಧ್ಯಮದವರು ಸರಿಗನ್ನಡ ಬಳಸುತ್ತಿಲ್ಲ ಎಂಬ ಮಾತುಗಳಿವೆ. ಹಾಗಾಗಿ ಮಾಧ್ಯಮಗಳು ಶಬ್ದ ಬಳಕೆಯಲ್ಲಿ ಸರಿಗನ್ನಡ ಬಳಸುವತ್ತ ಹೆಚ್ಚಿನ ಗಮನ ಹರಿಸಬೇಕಾದ ಅಗತ್ಯವಿದೆ ಎಂದು ಅವರು ಇದೇ ವೇಳೆ ಅಭಿಪ್ರಾಯ ಪಟ್ಟರು.




ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಸಹಯೋಗದಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಕನ್ನಡ ಕಾಯಕ ವರ್ಷಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಮಾಧ್ಯಮಗಳಲ್ಲಿ ಸರಿಗನ್ನಡ ಬಳಕೆ ಕುರಿತ ಅಭಿಯಾನಕ್ಕೆ ಮೇಲ್ಮನೆ ಸಭಾಪತಿ ಬಸವರಾಜ ಹೊರಟ್ಟಿ ಭಿತ್ತಿ ಪತ್ರ ಪ್ರದರ್ಶಿಸುವ ಮೂಲಕ ಚಾಲನೆ ನೀಡಿದರು. ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಟಿ.ಎಸ್.ನಾಗಾಭರಣ, ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟ ರಾಷ್ಟ್ರೀಯ ಅಧ್ಯಕ್ಷ, ಕನ್ನಡಪ್ರಭ ಪತ್ರಿಕೆಯ ಸಮನ್ವಯ ಮತ್ತು ವಿಶೇಷ ಯೋಜನೆಯ ಸಂಪಾದಕ ಬಿ.ವಿ. ಮಲ್ಲಿಕಾರ್ಜುನಯ್ಯ, ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಮೊದಲಾದವರು ಇದ್ದಾರೆ.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಟಿ.ಎಸ್. ನಾಗಾಭರಣ ಮಾತನಾಡಿ, ರಾಜ್ಯದಲ್ಲಿನ ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಕನ್ನಡ ಬಳಸಿ ಅಭಿಯಾನ ಪ್ರಾರಂಭಿಸಲಾಗಿದೆ. ಆದರೆ, ಕನ್ನಡ ಕಲಿಯದ ಸಿಬ್ಬಂದಿಯ ಬಗ್ಗೆ ವಿವರ ನೀಡಲು ಬ್ಯಾಂಕುಗಳು ಮುಂದಾಗುತ್ತಿಲ್ಲ ಎಂದು ಆರೋಪಿಸಿದರು.

ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟ ರಾಷ್ಟ್ರೀಯ ಅಧ್ಯಕ್ಷ, ಕನ್ನಡಪ್ರಭ ಪತ್ರಿಕೆಯ ಸಮನ್ವಯ ಮತ್ತು ವಿಶೇಷ ಯೋಜನೆಯ ಸಂಪಾದಕ ಬಿ.ವಿ.ಮಲ್ಲಿಕಾರ್ಜುನಯ್ಯ ಮಾತನಾಡಿ, ಪತ್ರಿಕೆಗಳಲ್ಲಿ ಆಂಗ್ಲ ಪದಗಳು ಕನ್ನಡೀಕರಣಗೊಳ್ಳುತ್ತಿದ್ದು, ಅಂತಹ ಪದಗಳಿಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ನವೀನ ಪದಗಳನ್ನು ಬಳಸುವ ವಿಧಾನ ಪರಿಚಯಿಸಬೇಕು ಎಂದರು.

ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಪ್ರಧಾನ ಕಾರ್ಯದರ್ಶಿ ಬಿ.ಸಿ.ಲೋಕೇಶ್, ನಗರ ಜಿಲ್ಲಾಧ್ಯಕ್ಷ ಸೋಮಶೇಖರ ಗಾಂಧಿ ಮತ್ತಿತರರಿದ್ದರು.